ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು - ೧೫

ಪಟ್ಟಿ-೦೩

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೈದನೆಯ ಅಧಿವೇಶನ

## ಬುಧವಾರ, ದಿನಾಂಕ: ೧೧ನೇ ಜುಲೈ, ೨೦೧೮

---

### ಸಮೂಹ - III

೧. ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

೨. ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

೩. ಸಣ್ಣ ಕೈಗಾರಿಕೆ ಸಚಿವರು

೪. ಗಣಿ ಮತ್ತು ಭೂ ವಿಜ್ಞಾನ ಹಾಗೂ ಮುಜರಾಯಿ ಸಚಿವರು

೫. ಕಾರ್ಮಿಕ ಸಚಿವರು

೬. ಅರಣ್ಯ ಸಚಿವರು

---

### ವಿವಿಧ ಸಮುದಾಯಗಳ ದೇವಸ್ಥಾನಗಳ ಅಭಿವೃದ್ಧಿಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೧(೨೫೫) ಗಣಿ ಮತ್ತು ಭೂ ವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೩-೧೪ನೇ ಸಾಲಿನಿಂದ ೨೦೧೭-೧೮ನೇ ಸಾಲಿನವರೆಗೆ ಮುಜರಾಯಿ ಇಲಾಖೆಯಿಂದ ಮಂಡ್ಯ ಜಿಲ್ಲೆಯ ವಿವಿಧ ಸಮುದಾಯಗಳ ದೇವಸ್ಥಾನಗಳ

ಅಭಿವೃದ್ಧಿಗೆ ಬಿಡುಗಡೆಗೊಂಡಿರುವ ಅನುದಾನ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; (ಕಾಮಗಾರಿವಾರು ವಿವರ ನೀಡುವುದು) ಸದರಿ ಕಾಮಗಾರಿಗಳಿಗೆ ಬಿಡುಗಡೆಯಾದ, ಖರ್ಚಾದ ಮತ್ತು ಉಳಿಕೆಯಾದ ಅನುದಾನ ಎಷ್ಟು;

(ಇ) ಬಿಡುಗಡೆಯಾದ ಅನುದಾನವನ್ನು ಯಾವ ಇಲಾಖೆಯಿಂದ ಅನುಷ್ಠಾನಗೊಳಿಸಲಾಗಿದೆ? (ಮೂರ್ಣ ವಿವರ ನೀಡುವುದು)

## ೯೪ಸಿ ಮತ್ತು ೯೪ಸಿಸಿ ಅರ್ಜಿಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೨(೨೨೫) ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೯೪ಸಿ ಮತ್ತು ೯೪ಸಿಸಿ ಯೋಜನೆಯಲ್ಲಿ ಇಲ್ಲಿಯವರೆಗೆ ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ಮಂಜೂರಾದ, ತಿರಸ್ಕರಿಸಲಾದ ಹಾಗೂ ವಿಲೇವಾರಿಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು;

(ಆ) ಮಂಜೂರಾದ ಅರ್ಜಿಗಳಲ್ಲಿ ಎಷ್ಟು ಹಕ್ಕುಪತ್ರಗಳನ್ನು ನೀಡಲಾಗಿದೆ;

(ಇ) ೯೪ಸಿ ಮತ್ತು ೯೪ಸಿಸಿ ಯೋಜನೆಯಡಿ ಅರ್ಜಿ ವಿಲೇವಾರಿ, ಹಕ್ಕು ಪತ್ರ ನೀಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ೯೪ಸಿ ಮತ್ತು ೯೪ಸಿಸಿ ಯಡಿ ಸಿ.ಆರ್.ಝಡ್., ಕುಮ್ಕಿ, ಗೋಮಾಳ, ಗೇರುಲೀಸ್, ಸಿ.ಎನ್.ಡಿ., ಡೀಮ್ಡ್ ಫಾರೆಸ್ಟ್ ವ್ಯಾಪ್ತಿಯಲ್ಲಿ ವಾಸವಿರುವ

ಬಡವರಿಗೆ ಹಕ್ಕುಪತ್ರ ವಿತರಿಸಲು ಇರುವ ತೊಡಕುಗಳೇನು; ಈ ವ್ಯಾಪ್ತಿಗೆ ಒಳಪಡುವ ಒಟ್ಟು ಪ್ರಕರಣಗಳೆಷ್ಟು; ಡೀಮ್ಡ್ ಫಾರೆಸ್ಟ್, ಗೋಮಾಳ ಸಹಿತ ಅಡೆತಡೆ ವಿರಹಿತ ಪಡಿಸಿ ಹಕ್ಕುಪತ್ರ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ೯೪ ಸಿ ಮತ್ತು ೯೪ ಸಿಸಿ ಯೋಜನೆಯಡಿ ಎಲ್ಲಾ ಅಡೆತಡೆಗಳನ್ನು ನಿವಾರಿಸಿ, ಯೋಜನೆಯ ಆಶಯದಂತೆ ಬಡವರಿಗೆ ಕಾಲಮಿತಿಯಲ್ಲಿ ಹಕ್ಕುಪತ್ರ ನೀಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ನೀಡುವುದು)

## ಹೊಸದಾಗಿ ರಚನೆಯಾದ ತಾಲ್ಲೂಕು ಕೇಂದ್ರಗಳ ಕಾರ್ಯಾರಂಭದ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೩(೨೩೪) ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯಾದ್ಯಂತ ಹೊಸದಾಗಿ ರಚನೆಗೊಂಡಂತಹ ತಾಲ್ಲೂಕು ಕೇಂದ್ರಗಳ ಸಂಖ್ಯೆ ಎಷ್ಟು; ಮತ್ತು ಅವುಗಳು ಕಾರ್ಯಾರಂಭ ಮಾಡಿವೆಯೇ;

(ಆ) ತಾಲ್ಲೂಕು ಕೇಂದ್ರ ರಚನೆಯಾದ ಮೇಲೆ ಅವುಗಳಡಿಯಲ್ಲಿ ಎಷ್ಟು ಇಲಾಖೆಗಳು ಕರ್ತವ್ಯ ನಿರ್ವಹಿಸಬೇಕಾಗುತ್ತದೆ; ಅಂತಹ ಇಲಾಖೆಗಳು ಸಧ್ಯ ಕಾರ್ಯಾರಂಭ ಮಾಡಲ್ಪಟ್ಟಿವೆಯೇ; ಇಲ್ಲವಾದಲ್ಲಿ, ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿವೆಯೇ;

(ಇ) ಹೊಸ ತಾಲ್ಲೂಕು ಕೇಂದ್ರದ ಕಛೇರಿಗಳಿಗೆ ಕಟ್ಟಡಗಳೂ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳು ಹಾಗೂ ಸಿಬ್ಬಂದಿಗಳನ್ನು ಒದಗಿಸಲಾಗಿದೆಯೇ;

(ಈ) ಹೊಸ ತಾಲ್ಲೂಕು ಕೇಂದ್ರಗಳಿಗೆ ಮೂಲಭೂತ ಸೌಲಭ್ಯಗಳಿಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು; ಮತ್ತು ಬಿಡುಗಡೆಯಾದ ಅನುದಾನದಲ್ಲಿ ಇದುವರೆಗೂ ಎಷ್ಟು ವೆಚ್ಚ ಮಾಡಲಾಗಿದೆ? (ಸಂಪೂರ್ಣವಾದ ಮಾಹಿತಿಯನ್ನು ನೀಡುವುದು)

## ಕಿರಿಯ ತರಬೇತಿ ಅಧಿಕಾರಿಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) –**

೩೪(೨೫೦+೧೮೯) ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೦ನೇ ಸಾಲಿನಲ್ಲಿ ಕೆಪಿಎಸ್‌ಸಿಯಿಂದ ಉದ್ಯೋಗ ಮತ್ತು ತರಬೇತಿ ಇಲಾಖೆಗೆ ೪೦೨ ಕಿರಿಯ ತರಬೇತಿ ಅಧಿಕಾರಿಗಳು ನೇಮಕ ಹೊಂದಿ ೮ ವರ್ಷಗಳು ಕಳೆದರೂ ಖಾಯಂ ಪೂರ್ಣ ಅವಧಿ ಘೋಷಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕ್ರಮ ತೆಗೆದುಕೊಳ್ಳಲಾಗಿದೆ;

(ಆ) ಸದರಿಯವರಿಗೆ ಪ್ರೊಬೆಷನರಿ ಪೀರಿಯಡ್ ಘೋಷಣೆ ಯಾವ ಅವಧಿಯಲ್ಲಿ ಮಾಡಲಾಗುವುದು; ಸದರಿ ಅಧಿಕಾರಿಗಳಿಗೆ ೭ ವರ್ಷಗಳಿಂದ ವೇತನ ಹಾಗೂ ಬಡ್ತಿ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಸದರಿ ಪ್ರಕರಣದಲ್ಲಿ ೪ ಕಿರಿಯ ತರಬೇತಿ ಅಧಿಕಾರಿಗಳು ಅಕಾಲಿಕ ಮರಣ ಹೊಂದಿದ್ದು, ಈವರೆಗೂ ಅವರ ಕುಟುಂಬಕ್ಕೆ ಯಾವುದೇ ಹಣಕಾಸಿನ ಸೌಲಭ್ಯ ಸಿಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ;

(ಈ) ಮೃತ ನೌಕರರಿಗೆ ಪರಿಹಾರ ನೀಡಲು ತಕ್ಷಣ ಕ್ರಮ ಕೈಗೊಳ್ಳಲಾಗುವುದೇ; ಈ ಪ್ರಕರಣದಲ್ಲಿ ವಿಳಂಬ ತೋರಿದ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಜರುಗಿಸುವ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು;

(ಉ) ೨೦೧೩ನೇ ಸಾಲಿನಲ್ಲಿ ಜೆ.ಓ.ಸಿ.ಯಿಂದ ಉದ್ಯೋಗ ಮತ್ತು ತರಬೇತಿ ಇಲಾಖೆಗೆ ಕಿರಿಯ ತರಬೇತಿ ಅಧಿಕಾರಿಗಳಾಗಿ ವಿಲೀನಗೊಂಡವರ ಸಂಖ್ಯೆ ತರಬೇತಿ ಪೂರ್ಣಗೊಂಡಿರುವವರ/ಪ್ರೊಬೇಷನರಿ ಪೀರಿಯಡ್ಸ್ ಘೋಷಣೆ ಆದವರ ಸಂಖ್ಯೆ ಎಷ್ಟು;

(ಊ) ಸೇವಾ ಅವಧಿಯು ೫ ವರ್ಷಕ್ಕಿಂತ ಕಡಿಮೆ ಇರುವ ಕಿರಿಯ ತರಬೇತಿ ಅಧಿಕಾರಿಗಳಿಗೆ ತರಬೇತಿಯಿಂದ ವಿನಾಯಿತಿ ನೀಡಲು ಸರ್ಕಾರ ಚಿಂತಿಸಿದೆಯೇ?

## ಕೊಡಗು ಜಿಲ್ಲೆಯಲ್ಲಿ ಮಳೆಯಿಂದಾದ ಹಾನಿ ಕುರಿತು

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫(೨೨) ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೮ರ ಮೇ ಮತ್ತು ಜೂನ್ ತಿಂಗಳಿನಲ್ಲಿ ಕೊಡಗು ಜಿಲ್ಲೆಯಲ್ಲಿ ಮಳೆಯಿಂದ ಉಂಟಾದ ಪರಿಣಾಮಗಳೇನು; ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಮಳೆಯಿಂದ ಜಿಲ್ಲೆಯಲ್ಲಿ ಉಂಟಾದ ನಷ್ಟದ ಅಂದಾಜು ಎಷ್ಟು; ಈ ನಷ್ಟ ಭರ್ತಿಯನ್ನು ತುಂಬಲು ಸರ್ಕಾರ ವಿಶೇಷ ಅನುದಾನವನ್ನು ನೀಡುವುದೇ; (ವಿವರ ನೀಡುವುದು)

(ಇ) ಮಳೆಯಲ್ಲಿ ಕೊಚ್ಚಿ ಹೋಗಿ ಪ್ರಾಣ ಕಳೆದುಕೊಂಡವರುಗಳಿಗೆ ನೀಡಲಾದ ಪರಿಹಾರಗಳೇನು? (ವಿವರ ನೀಡುವುದು)

## ಕಂದಾಯ ಗ್ರಾಮಗಳ ರಚನೆ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬(೧೭೮) ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯಾದ್ಯಂತ ಗೊಲ್ಲರ ಹಟ್ಟಿಗಳು, ತಾಂಡಾಗಳು ಹಾಗೂ ನಾಯಕರ ಹಟ್ಟಿಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವ ಕಾರ್ಯ ಯಾವ ಹಂತದಲ್ಲಿದೆ;

(ಆ) ಈವರೆಗೆ ಎಷ್ಟು ಕಂದಾಯ ಗ್ರಾಮಗಳನ್ನು ರಚನೆ ಮಾಡಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)

## ಶಿವಮೊಗ್ಗ ಜಿಲ್ಲೆಯಲ್ಲಿ ಅರಣ್ಯ ಭೂಮಿಯನ್ನು ಸಕ್ರಮಗೊಳಿಸಲು ಬಂದಿರುವ ಅರ್ಜಿಗಳು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೭(೧೭೯) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಅರಣ್ಯ ಭೂಮಿಯನ್ನು ಸಕ್ರಮಗೊಳಿಸಲು ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ವಿಲೇವಾರಿ ಮಾಡಲಾಗಿರುವ ಹಾಗೂ ಇನ್ನೂ ವಿಲೇವಾರಿ ಮಾಡದೆ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು;

(ಆ) ಅರಣ್ಯಾಧಿಕಾರಿಗಳು ಅರಣ್ಯ ಪ್ರದೇಶದಲ್ಲಿ ವ್ಯವಸಾಯ ಮಾಡುತ್ತಿದ್ದ ರೈತರನ್ನು ಒಕ್ಕಲೆಬ್ಬಿಸಿ, ಅವರುಗಳಿಗೆ ಕಿರುಕುಳ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯಿಂದ ಪಡೆದಿರುವ ಸಾಲದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೩೮(೧೮೩) ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯಿಂದ ೧೯೫೭ ರಿಂದ ೨೦೧೧ರವರೆಗೆ ವಿವಿಧ ಯೋಜನೆಗಳಡಿಯಲ್ಲಿ ನೀಡಿರುವ ಸಾಲದ ಮೊತ್ತ ಎಷ್ಟು; (ವಿವರ ನೀಡುವುದು)

(ಆ) ಈ ಸಾಲಗಳ ಮೇಲಿನ ಬಡ್ಡಿಯ ಮೊತ್ತವೆಷ್ಟು;

(ಇ) ಈ ಸಾಲವನ್ನು ಮನ್ನಾ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಈ) ಇದ್ದಲ್ಲಿ, ಯಾವಾಗ ಮನ್ನಾ ಮಾಡಲಾಗುವುದು? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ಕೆರ್‌ಟಿ ಮೀಸಲು ಅರಣ್ಯ ಪ್ರದೇಶವನ್ನು ಖಾಸಗಿ ವ್ಯಕ್ತಿಗಳಿಗೆ ಖಾತೆ ಮಾಡುತ್ತಿರುವ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯(೨೦೧) ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆ, ವಿರಾಜಪೇಟೆ ತಾಲ್ಲೂಕಿನ, ವಿರಾಜಪೇಟೆ ಅರಣ್ಯ ವಿಭಾಗದ ಮಾರುಕಟ್ಟೆ ಅರಣ್ಯ ವಲಯದಲ್ಲಿನ ಕೆರ್‌ಟಿ ಮೀಸಲು ಅರಣ್ಯದಲ್ಲಿರುವ ಪೋರ್ಟ್ ಲ್ಯಾಂಡ್, ರಬ್ಬರ್ ಕಂಪನಿಗೆ ಗುತ್ತಿಗೆ ನೀಡಲಾದ ಅರಣ್ಯ ಪ್ರದೇಶಕ್ಕೆ ಕಾನೂನು ಬಾಹಿರವಾಗಿ ಕಂದಾಯ ನಿಗದಿ ಮಾಡಿ ಖಾಸಗಿ ವ್ಯಕ್ತಿಗಳಿಗೆ ಖಾತೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಾನೂನು ಬಾಹಿರವಾಗಿ ಮಾಡಿರುವ ಈ ಖಾತೆಗಳನ್ನು ರದ್ದುಪಡಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಇ) ಸದರಿ ಕಾನೂನು ಬಾಹಿರ ಪ್ರಕ್ರಿಯೆಯಲ್ಲಿ ಭಾಗಿಯಾಗಿರುವ ಕಂದಾಯ ಇಲಾಖೆಯ ಅಧಿಕಾರಿ/ನೌಕರರ ಮೇಲೆ ಶಿಸ್ತು ಕ್ರಮ ಕೈಗೊಳ್ಳಲಾಗಿದೆಯೇ?

## ಮುಜರಾಯಿ ಇಲಾಖೆಯಿಂದ ದೇವಸ್ಥಾನಗಳಿಗೆ ಬಿಡುಗಡೆಯಾದ ಅನುದಾನ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೪೦(೨೩೨) ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಯಾವ ಯಾವ ದೇವಸ್ಥಾನಗಳಿಗೆ ಎಷ್ಟೆಷ್ಟು ಅನುದಾನ ಮುಜರಾಯಿ ಇಲಾಖೆಯಿಂದ ಬಿಡುಗಡೆಯಾಗಿದೆ; (ಕಳೆದ ಎರಡು ವರ್ಷಗಳ ಮಾಹಿತಿ ನೀಡುವುದು)

(ಆ) ಈ ಜಿಲ್ಲೆಗಳ ಅನೇಕ ದೇವಸ್ಥಾನಗಳ ಕಾಮಗಾರಿಗಳಿಗೆ ಜನಪ್ರತಿನಿಧಿಗಳಿಂದ ಮತ್ತು ಸಾರ್ವಜನಿಕರಿಂದ ಅನುದಾನ ಕೋರಿಕೆ ಬಂದಿದ್ದರೂ ಸಹ ಇದುವರೆಗೆ ಬಿಡುಗಡೆ ಮಾಡದಿರಲು ಕಾರಣಗಳೇನು; ಎಷ್ಟು ದಿನಗಳಲ್ಲಿ ಬಿಡುಗಡೆ ಮಾಡಲಾಗುವುದು;

(ಇ) ಅನುದಾನ ಬಿಡುಗಡೆಗೆ ಇರುವ ಮಾನದಂಡಗಳೇನು; ಅನುಸರಿಸುವ ನಿಯಮಾವಳಿಗಳೇನು?

## ಸ್ಮಶಾನ ಭೂಮಿಯ ಕೊರತೆ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)** –

೪೧(೧೮೫) ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯ ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಸ್ಮಶಾನ ಭೂಮಿ ಇಲ್ಲದ ಕಡೆಗಳಲ್ಲಿ ಭೂಮಿಯನ್ನು ಖರೀದಿಸಲು ಹಣ ಕಾಯ್ದಿರಿಸಿದ್ದು ನಿಜವೇ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಹಣವನ್ನು ಕಾಯ್ದಿರಿಸಿ ಎಷ್ಟು ಕಾಲವಾಗಿದೆ ಮತ್ತು ಇದುವರೆವಿಗೂ ಎಷ್ಟು ಕಡೆ ಭೂಮಿಯನ್ನು ಖರೀದಿಸಲಾಗಿದೆ; ಹಾಗೆ ಖರೀದಿಸಿದಲ್ಲಿ ಭೂಮಿಗೆ ತಗುಲಿದ ವೆಚ್ಚ ಎಷ್ಟು; (ಮಾಹಿತಿ ನೀಡುವುದು)

(ಇ) ಭೂಮಿಯನ್ನು ಯಾವ ವರ್ಷದಲ್ಲಿ, ಯಾವ ಯಾವ ಗ್ರಾಮಗಳಲ್ಲಿ ಎಷ್ಟು ಮೊತ್ತಕ್ಕೆ ಎಷ್ಟು ಎಕರೆ ಖರೀದಿಸಲಾಗಿದೆ; ಖರೀದಿಸಿದ್ದಲ್ಲಿ, ತಗುಲಿದ ವೆಚ್ಚ ಮತ್ತು ಯಾವ ವರ್ಷದಲ್ಲಿ ಎಂಬುದರ ಕುರಿತು ಗ್ರಾಮವಾರು ಸಂಪೂರ್ಣ ಮಾಹಿತಿ ಒದಗಿಸುವುದು?

## ಭೂಸ್ವಾಧೀನಪಡಿಸಿದ ಜಮೀನಿಗೆ ನಿಗದಿತ ಸಮಯದೊಳಗೆ ಪರಿಹಾರಧನ ನೀಡದಿರುವ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) –**

೪೨(೧೯೦) ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಹಲವಾರು ವರ್ಷಗಳಿಂದ ನೆನೆಗುದಿಯಲ್ಲಿರುವ ಭೂಸ್ವಾಧೀನ ಪ್ರಕರಣಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಭೂಸ್ವಾಧೀನ ಮಾಡಿಕೊಂಡ ಹಲವಾರು ವರ್ಷಗಳು ಕಳೆದರೂ ಸಹ ಭೂ ಪರಿಹಾರ ಕೊಡದೇ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ತೆಗೆದುಕೊಳ್ಳಲಾಗಿದೆ;

(ಇ) ಭೂಸ್ವಾಧೀನ ಮಾಡಿಕೊಂಡ ನಂತರ ನ್ಯಾಯಾಲಯದಿಂದ ಆದೇಶ ಬಂದರೂ ಪರಿಹಾರ ಕೊಡದೇ ವಿಳಂಬ ಮಾಡಲು ಕಾರಣವೇನು; ವಿಳಂಬಕ್ಕೆ ಕಾರಣವಾದವರ ಮೇಲೆ ಕ್ರಮ ಜರುಗಿಸಲಾಗಿದೆಯೇ; (ವಿವರ ನೀಡುವುದು)

(ಈ) ಸರ್ಕಾರದ ನೀತಿಯಂತೆ ನಿಗದಿತ ಸಮಯದೊಳಗೆ ಭೂಸ್ವಾಧೀನಪಡಿಸಿದ ಜಾಗದಲ್ಲಿ ಅಭಿವೃದ್ಧಿ ಮಾಡದೇ ಇರುವುದರಿಂದ ಭೂಸ್ವಾಧೀನ ಪ್ರಕ್ರಿಯೆಯಿಂದ ಕೈಬಿಡುವ ಬಗ್ಗೆ ಸರ್ಕಾರದ ಸ್ಪಷ್ಟ ಹೇಳಿಕೆ ಏನು;

(ಉ) ಸ್ವಾಧೀನಪಡಿಸಿಕೊಂಡು ಈವರೆಗೂ ಪರಿಹಾರ ಧನ ನೀಡದಿರುವುದರಿಂದ ಮಾರುಕಟ್ಟೆ ದರ ನಿಗದಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ಕೌಶಲ್ಯ ಕರ್ನಾಟಕ ಯೋಜನೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ)** –

೪೩(೨೧೮) ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೌಶಲ್ಯ ಕರ್ನಾಟಕ ಯೋಜನೆಯು ಕೇಂದ್ರ ಸರ್ಕಾರದ ಸ್ಕಿಲ್ ಇಂಡಿಯಾ ಯೋಜನೆಯ ಒಂದು ಭಾಗವೇ; ಕೌಶಲ್ಯ ಕರ್ನಾಟಕ ಯೋಜನೆಯ ಕಾರ್ಯಕ್ರಮಗಳೇನು; ಕೌಶಲ್ಯ ಕರ್ನಾಟಕ ಯೋಜನೆಗೆ ಕಾಯ್ದಿರಿಸಿದ ಅನುದಾನವೆಷ್ಟು; ಇದರಲ್ಲಿ ಕೇಂದ್ರ ಮತ್ತು ರಾಜ್ಯದ ಪಾಲು ಎಷ್ಟು;

(ಆ) ಕೌಶಲ್ಯ ಕರ್ನಾಟಕ ಯೋಜನೆಯಡಿ ತರಬೇತಿ ಮತ್ತು ಉದ್ಯೋಗಕ್ಕಾಗಿ ಇಲ್ಲಿಯವರೆಗೆ ನೋಂದಣಿ ಮಾಡಿಕೊಂಡ ಅಭ್ಯರ್ಥಿಗಳ ಸಂಖ್ಯೆ ಎಷ್ಟು;

(ಇ) ಯಾವ ಯಾವ ತರಬೇತಿ ಮತ್ತು ಉದ್ಯೋಗಗಳನ್ನು ನೀಡಲಾಗುವುದು; ರಾಜ್ಯದ ಎಲ್ಲೆಲ್ಲಿ ತರಬೇತಿ ಆಯೋಜಿಸಲಾಗುವುದು; ತರಬೇತಿ ಮತ್ತು ಉದ್ಯೋಗ ನೀಡಲು ಯಾವ ಯಾವ ಸರ್ಕಾರೇತರ ಸಂಸ್ಥೆಗಳೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ;

(ಈ) ತರಬೇತಿಯನ್ನು ಯಾವಾಗ ಪ್ರಾರಂಭಿಸಲಾಗುವುದು; ಉದ್ಯೋಗವನ್ನು ಯಾವಾಗ ನೀಡಲು ಉದ್ದೇಶಿಸಲಾಗಿದೆ; ತರಬೇತಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ ಯಾವ ಸೌಲಭ್ಯಗಳನ್ನು ಒದಗಿಸಲಾಗುವುದು?

## ರಾಜ್ಯದ ಸಾರ್ವಜನಿಕ ನಿಗಮಗಳಲ್ಲಿನ ಅನುಕಂಪ ಆಧಾರದ ನೇಮಕಾತಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೪೪(೨೪೯) ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ ಹಾಗೂ ಮಾಹಿತಿ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಿಂದ ರಾಜ್ಯದ ಎಲ್ಲಾ ನಿಗಮಗಳಲ್ಲಿನ ಅನುಕಂಪ ಆಧಾರಿತ ನೇಮಕಾತಿಗಳನ್ನು ತಡೆ ಹಿಡಿಯುವಂತೆ ಯಾವ ಯಾವ ದಿನಾಂಕಗಳಲ್ಲಿ ಸುತ್ತೋಲೆ ಹೊರಡಿಸಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಆ) ಈ ರೀತಿ ಸುತ್ತೋಲೆ ಹೊರಡಿಸಲು ಕಾರಣಗಳೇನು;

(ಇ) ಅನುಕಂಪದ ಆಧಾರಿತ ನೇಮಕಾತಿಗೆ ನಿರ್ಬಂಧ ಹೇರಿ ನೇರ ನೇಮಕಾತಿಗೆ ಯಾವುದೇ ನಿರ್ಬಂಧ ಹೇರದಿರಲು ಕಾರಣಗಳೇನು;

(ಈ) ಯಾವ ಕಾಲಮಿತಿಯೊಳಗೆ ಈ ನಿರ್ಬಂಧವನ್ನು ತೆರವುಗೊಳಿಸಿ ಸಾವಿರಾರು ಬಡ ನೌಕರರ ಕುಟುಂಬಕ್ಕೆ ಅನುಕೂಲ ಮಾಡಿಕೊಡಲಾಗುವುದು?

## ರಾಜ್ಯದಲ್ಲಿ ರೈತರಿಗೆ ನೀಡಲಾಗುತ್ತಿರುವ ಪ್ರಾಕೃತಿಕ ವಿಕೋಪ ಪರಿಹಾರ ಮೊತ್ತ ಹೆಚ್ಚಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೫(೨೪೧) ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರ ರೈತರ ಹಿತಕ್ಕಾಗಿ ಶೂನ್ಯ ಬಡ್ಡಿ ಸಾಲ, ನಿಬಡ್ಡಿ ಸಾಲ, ಬಡ್ಡಿ ರಿಯಾಯಿತಿ, ಸಾಲ ಮನ್ನಾ ಹೀಗೆ ಮುಂತಾದ ವಿಶೇಷ ಸೌಲಭ್ಯಗಳನ್ನು ಕೊಟ್ಟು, ಇನ್ನೊಂದು ಕಡೆಯಲ್ಲಿ ೨೦೧೫ರ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಪ್ರಾಕೃತಿಕ ವಿಕೋಪದಿಂದ ಹಾನಿಯಾದ ಸಂದರ್ಭದಲ್ಲಿ ರೈತರಿಗೆ ಅತ್ಯಂತ ಕಡಿಮೆ ಪರಿಹಾರ ಮೊತ್ತ ನೀಡುವುದು ಸರಿಯೇ; ಇಲ್ಲವಾದಲ್ಲಿ ಇದನ್ನು ಸರಿಪಡಿಸಲು ತೆಗೆದುಕೊಳ್ಳುವ ಕ್ರಮಗಳೇನು;

(ಆ) ರಾಜ್ಯದಲ್ಲಿ ಪ್ರಸ್ತುತ ರೈತರಿಗೆ ಬೆಳೆಹಾನಿ ಪರಿಹಾರ ಮೊತ್ತವು ಸರ್ಕಾರ ಭೂಸ್ವಾಧೀನ ಪಡಿಸಿಕೊಳ್ಳುವಾಗ ನೀಡುವ ಮೊತ್ತಕ್ಕಿಂತ ಅತ್ಯಂತ ಕಡಿಮೆ ಇರುವುದರಿಂದ ಪ್ರಸಕ್ತ ನೀಡುತ್ತಿರುವ ಪರಿಹಾರ ಮೊತ್ತವನ್ನು ಭೂಸ್ವಾಧೀನಪಡಿಸಿಕೊಳ್ಳುವಾಗ ನೀಡುವ ಮೊತ್ತಕ್ಕೆ ಹೆಚ್ಚಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ ಕಾರಣಗಳೇನು?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. ಕಾಮ 290 - 1500 ಪ್ರತಿಗಳು (ವಿ.)